ಇ) **ಮತ್ತು ಈ)** ದೇವಸ್ಥಾನದ ಸಿಬ್ಬಂದಿಗಳಿಗೆ ವೇತನ ಶ್ರೇಣಿ ನೀಡುವ ವಿಚಾರವಾಗಿ ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆ ಇವರುಗಳ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದ್ದು, ಸದರಿ ಸಮಿತಿಯು ವರದಿ ಸಲ್ಲಿಸಿದ ನಂತರ ಪರಿಶೀಲಿಸಲಾಗುವುದು.

ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ

2275 (2629); ಶ್ರೀ ಗೋಪಾಲ ಪೂಜಾರಿ (ಬೈಂದೂರು)

ಅ) ಕೊಲ್ಲೂರು ಶ್ರೀ ಮೂಕಾಂಬಿಕಾ ದೇವಾಲಯದ ಕಾಲೇಜು ಮತ್ತು ಪ್ರೌಢಶಾಲಾ ಬೋಧಕರು ಹಾಗೂ ಬೋಧಕೇತರ ಸಿಬ್ಬಂದಿಗಳಿಗೆ ಸರ್ಕಾರಿ ವೇತನ ಶ್ರೇಣಿ ನೀಡಲಾಗಿದೆಯೇ;

ಆ) ಹಾಗಿಲ್ಲದಿದ್ದಲ್ಲಿ ವಿಳಂಬಕ್ಕೆ ಕಾರಣಗಳೇನು;

ಇ) ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; ಸರ್ಕಾರಿ ವೇತನ ಶ್ರೇಣಿಯನ್ನು ಯಾವಾಗ ನೀಡಲಾಗುವುದು?

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು)

ಅ) ಕೊಲ್ಲೂರು ಶ್ರೀ ಮೂಕಾಂಬಿಕಾ ದೇವಾಲಯದ ವತಿಯಿಂದ ಒಟ್ಟು 7 ಶಿಕ್ಷಣ ಸಂಸ್ಥೆಗಳನ್ನು ನಡೆಸಲಾಗುತ್ತಿದೆ. ಒಟ್ಟು 57 ಬೋಧಕ ಮತ್ತು 13 ಬೋಧಕೇತರ ಒಟ್ಟು 70 ಸಿಬ್ಬಂದಿಗಳಿರುತ್ತಾರೆ. ಇದರಲ್ಲಿ 6 ಜನ ಅನುದಾನಿತ ಶಾಲೆಯ ಶಿಕ್ಷಕರಾಗಿದ್ದು, ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿನ 31 ಶಿಕ್ಷಕರು ಸರ್ಕಾರಿ ವೇತನ ಶ್ರೇಣಿ ಪಡೆಯುತ್ತಿರುತ್ತಾರೆ ಉಳಿದ 20 ಬೋಧಕ ಮತ್ತು 13 ಬೋಧಕೇತರ ಸಿಬ್ಬಂದಿಗಳಿಗೆ ವೇತನ ಶ್ರೇಣಿ ನೀಡುವ ಪ್ರಸ್ತಾಪವು ಪರಿಶೀಲನೆಯಲ್ಲಿರುತ್ತದೆ.

ಆ) **ಮತ್ತು** ಇ) ಬೋಧಕ–ಬೋಧಕೇತರ ಸಿಬ್ಬಂದಿಗಳಿಗೆ ವೇತನ ನಿಗಧಿಪಡಿಸುವ ಬಗ್ಗೆ ಪರಿಶೀಲಿಸಿ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆ ಇವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದೆ. ಸದರಿ ಸಮಿತಿ ವರದಿ ಸಲ್ಲಿಸಿದ ನಂತರ ಪರಿಶೀಲಿಸಲಾಗುವುದು.

ಹೊಸದಾಗಿ ಪಶು ಚಿಕಿತ್ಸಾಲಯವನ್ನು ಪ್ರಾರಂಭಿಸುವುದು

2277 (2631); ಶ್ರೀ ಗೋಪಾಲ ಪೂಜಾರಿ (ಬೈಂದೂರು)

ಅ) ಬೈಂದೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಶಿರೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಹೊಸದಾಗಿ ಪಶು ಚಿಕಿತ್ಸಾಲಯವನ್ನು ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಪಶು ಚಿಕಿತ್ಸಾಲಯವನ್ನು ಯಾವಾಗ ಮಂಜೂರು ಮಾಡಲಾಗುವುದು;

ಇ) ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು)

ಅ) ಹೌದು.

ಆ) ಪ್ರಸಕ್ತ ಸಾಲಿನಲ್ಲಿ ನೂತನ ಪಶು ಚಿಕಿತ್ಸಾಲಯಗಳನ್ನು ತೆರೆಯುವ ಯೋಜನಾ ಕಾರ್ಯಕ್ರಮ ಇರುವುದಿಲ್ಲ.

ಇ) ಉದ್ಭವಿಸುವುದಿಲ್ಲ.